ಬೀದರ್ ಜಿಲ್ಲೆಯಲ್ಲಿ ಜಾನುವಾರುಗಳಿಗೆ ಮೇವಿನ ಸಮಸ್ಯೆ ಬಗ್ಗೆ

ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

64 (62) ಮಾನ್ಯ ಪಶುಸಂಗೋಪನೆ ಮತ್ತು ಮೀನುಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆಯಲ್ಲಿರುವ ಜಾನುವಾರುಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಜಿಲ್ಲೆಯಲ್ಲಿ ಜಾನುವಾರುಗಳಿಗೆ ಮೇವಿನ ಸಮಸ್ಯೆ ಎದುರಾಗಿದ್ದು ರೈತರು ತಮ್ಮ ಜಾನುವಾರುಗಳನ್ನು ಕಸಾಯಿ ಖಾನೆಗೆ ಕಳುಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಮೇವಿಗಾಗಿ ರೈತರು ಜಿಲ್ಲೆಯ ತಾಲ್ಲೂಕು ಕೇಂದ್ರಗಳಲ್ಲಿ ಇರುವ ಮೇವಿನ ಕೇಂದ್ರದಲ್ಲಿ ದಿನ ಪೂರ್ತಿ ಕುಳಿತರು ರೈತರಿಗೆ ಮೇವು ಸಿಗುತ್ತಿಲ್ಲದಿರುವುದಕ್ಕೆ ಕಾರಣಗಳೇನು ;

(ಈ) ಮಳೆ ಇಲ್ಲದ ಕಾರಣ ಮೇವಿನ ಬೇಡಿಕೆ ಇದ್ದು ವಲಯವಾರು ಗೋ-ಶಾಲೆಗಳನ್ನು ತೆರೆಯಲು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)